ಕರ್ನಾಟಕ ಸರ್ಕಾರ
Government of karnataka
ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in
Phone - 080 26980100
Fax - 080 26422377

ಸಂಖ್ಯೆ: E- 8146 DSERT/EVG/ ಸಂಭ್ರಮ ಶನಿವಾರ/2022-23 ದಿನಾಂಕ:28-10-2022

## ಸುತ್ತೋಲೆ

ವಿಷಯ: **'ಸಂಭ್ರಮ ಶನಿವಾರ'** - ಶಾಲೆಗಳಲ್ಲಿ ಬ್ಯಾಗ್ ರಹಿತ ದಿನದ ಆಚರಣೆ ಸಂಬಂಧ ವಿದ್ಯಾರ್ಥಿ ಚಟುವಟಿಕೆ ಪುಸ್ತಕಗಳು ಹಾಗೂ ಶಿಕ್ಷಕರ ಕೈಪಿಡಿ ಗಳನ್ನು ವೆಬ್ ಸೈಟ್ ನಲ್ಲಿ ಅಳವಡಿಸಿರುವ ಕುರಿತು

ಉಲ್ಲೇಖ: ಸರ್ಕಾರದ ಆದೇಶ ಸಂ: ಇಡಿ 107 ಯೋಯೋಕ 2017, ಬೆಂಗಳೂರು, ದಿನಾಂಕ: 03-05-2019

************

ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಪ್ರತಿ ತಿಂಗಳು ಒಂದು ಶನಿವಾರದಂದು **'ಸಂಭ್ರಮ ಶನಿವಾರ'** – ಬ್ಯಾಗ್ ರಹಿತ ದಿನವನ್ನು ಆಚರಿಸಲು ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿದೆ. ಆ ದಿನದಂದು ಮಕ್ಕಳನ್ನು ಬಹುಮುಖ ಚಟುವಟಿಕೆಗಳಲ್ಲಿ ತೊಡಗಿಸುವುದರ ಮೂಲಕ ನಾಗರಿಕ ಪ್ರಜ್ಞೆಯನ್ನು ಬೆಳೆಸುವ ಉದ್ದೇಶದಿಂದ ವಿದ್ಯಾರ್ಥಿಗಳಿಗಾಗಿ ವಿವಿಧ 10 ವಿಷಯಗಳಲ್ಲಿ ಸ್ವಯಂ ವಿವರಣಾತ್ಮಕ ಚಿತ್ರ ಸಹಿತ ಚಟುವಟಿಕೆ ಪುಸ್ತಕಗಳನ್ನು ಹಾಗೂ ಅವುಗಳನ್ನು ತರಗತಿಗಳಲ್ಲಿ ನಿರ್ವಹಿಸಲು ಶಿಕ್ಷಕರಿಗೆ ಮಾರ್ಗದರ್ಶಿ ಕೈಪಿಡಿಯನ್ನು ಸಿದ್ಧಪಡಿಸಲಾಗಿದೆ.

ಈಗಾಗಲೇ ಕಲಿಕಾ ಚೇತರಿಕೆ ಉಪಕ್ರಮದ ಅಡಿಯಲ್ಲಿ ವಿದ್ಯಾರ್ಥಿಗಳಲ್ಲಿ ಅನ್ವಯಿಕ ಕಲಿಕಾ ಮನೋಭಾವವನ್ನು ಪ್ರೋತ್ಸಾಹಿಸುವಂತೆ, ಕಲಿಕಾ ಹಾಳೆಗಳಲ್ಲಿ ಚಟುವಟಿಕೆಗಳನ್ನು ನೀಡಲಾಗಿದೆ. ಈ ಕಲಿಕಾ ಹಾಳೆಗಳಲ್ಲಿನ ಚಟುವಟಿಕೆಗಳಿಗೆ ಪೂರಕವಾಗಿ **'ಸಂಭ್ರಮ ಶನಿವಾರ'** ಚಟುವಟಿಕಾ ಪುಸ್ತಕಗಳನ್ನು ರೂಪಿಸಿರುವುದರಿಂದ ಪ್ರತಿ ತಿಂಗಳಲ್ಲಿ ಒಂದು ಶನಿವಾರದಂದು ಬ್ಯಾಗ್ ರಹಿತ ದಿನವನ್ನು ಆಚರಿಸುವುದು. ವಿಶೇಷವಾಗಿ ಮಾಸಿಕ ಸಮಾಲೋಚನಾ ಸಭೆಗಳು ನಡೆಯುವ ದಿನಗಳಂದು ಶಾಲೆಗಳಲ್ಲಿ ಶಿಕ್ಷಕರ ಸಂಖ್ಯೆ ಕಡಿಮೆಯಿರುವ ಸಂದರ್ಭದಲ್ಲಿ ಈ ಸಾಹಿತ್ಯವನ್ನು ಬಳಸಿಕೊಂಡು **'ಸಂಭ್ರಮ ಶನಿವಾರ'** ವನ್ನು ಆಚರಿಸಬಹುದಾಗಿದೆ. ಈ ಸಂಬಂಧ ವಿದ್ಯಾರ್ಥಿ ಚಟುವಟಿಕೆ ಪುಸ್ತಕಗಳನ್ನು ಹಾಗೂ ಶಿಕ್ಷಕರ ಕೈಪಿಡಿಯನ್ನು DSERT ವೆಬ್ ಸೈಟ್‌ನಲ್ಲಿ (https://dsert.kar.nic.in) ಅಪಲೋಡ್ ಮಾಡಿದ್ದು, ಸದರಿ ಕಲಿಕಾ ಸಾಮಗ್ರಿಗಳನ್ನು ಉಪಯೋಗಿಸುವಂತೆ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಎಲ್ಲಾ ಶಿಕ್ಷಕರಿಗೆ ಮಾಹಿತಿ ಒದಗಿಸುವುದು.

೨೮.೧೦.೨೦೨೨

ರಾಜ್ಯ ಯೋಜನಾ ನಿರ್ದೇಶಕರು,
ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.

ಗೆ,

1. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ಅಗತ್ಯ ಕ್ರಮಕ್ಕಾಗಿ.
2. ಉಪ ನಿರ್ದೇಶಕರು (ಆಡಳಿತ) ರವರ ಮುಖಾಂತರ ರಾಜ್ಯದ ಎಲ್ಲಾ BEO ಮತ್ತು BRC ಗಳಿಗೆ ಹಾಗೂ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರಿಗೆ BEO ಗಳ ಮೂಲಕ ಅಗತ್ಯ ಕ್ರಮಕ್ಕಾಗಿ.